ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2017–18 ದಿನಾಂಕ: 29–08–2017

# ಪತ್ರಿಕಾ ಆಮಂತ್ರಣ

1. **ಸ್ವಯಂ ಚಾಲಿತ ವಿದ್ಯುನ್ಮಾನ ಚಾಲನಾ ಪರೀಕ್ಷಾ ಪಥ:**

ಉದ್ಘಾಟನೆ:

ರಾಮಲಿಂಗಾರೆಡ್ಡಿ,
ಸಾರಿಗೆ ಹಾಗೂ ಚಿಕ್ಕಬಳ್ಳಾಪುರ ಜಿಲ್ಲೆ ಉಸ್ತುವಾರಿ ಸಚಿವರು.

ಅಧ್ಯಕ್ಷತೆ:

ಬಿ. ಶಿವಣ್ಣ, ಶಾಸಕರು, ಆನೇಕಲ್ ವಿಧಾನಸಭಾ ಕ್ಷೇತ್ರ.

ದಿನಾಂಕ: 30–08–2017, ಬುಧವಾರ ಸಮಯ : ಬೆಳಿಗ್ಗೆ 9–30 ಗಂಟೆಗೆ

ಸ್ಥಳ: ಚಿಕ್ಕನಾಗಮಂಗಲ ಗ್ರಾಮ, ಹುಸ್ಕೂರು ಕ್ರಾಸ್, ಎಲೆಕ್ಟ್ರಾನಿಕ್ ಸಿಟಿ, ಬೆಂಗಳೂರು.

**ನೂತನ ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಚೇರಿ, ಚಂದಾಪುರ–ಕಟ್ಟಡ ಉದ್ಘಾಟನೆ:**

ರಾಮಲಿಂಗಾರೆಡ್ಡಿ,
ಸಾರಿಗೆ ಹಾಗೂ ಚಿಕ್ಕಬಳ್ಳಾಪುರ ಜಿಲ್ಲೆ ಉಸ್ತುವಾರಿ ಸಚಿವರು.

ಅಧ್ಯಕ್ಷತೆ:

ಬಿ. ಶಿವಣ್ಣ, ಶಾಸಕರು, ಆನೇಕಲ್ ವಿಧಾನಸಭಾ ಕ್ಷೇತ್ರ.

ದಿನಾಂಕ: 30–08–2017, ಬುಧವಾರ ಸಮಯ : ಬೆಳಿಗ್ಗೆ 11.00 ಗಂಟೆಗೆ
ಸ್ಥಳ: ಮರಸೂರು ಗ್ರಾಮ, ಆನೇಕಲ್ ಚಂದಾಪುರ ಮುಖ್ಯರಸ್ತೆ, ಆನೇಕಲ್ ತಾಲ್ಲೂಕು–562 106.

2. "ಸಮಗ್ರ ಕೃಷಿ" ಯಲ್ಲಿ ಯಶಸ್ವಿ ರೈತರ ಅನುಭವ–ಕಾರ್ಯಾಗಾರ:

ಉದ್ಘಾಟನೆ:
ಕೃಷ್ಣ ಬೈರೇಗೌಡ, ಕೃಷಿ ಸಚಿವರು.

ಅಧ್ಯಕ್ಷತೆ:
ಟಿ.ಎಂ. ವಿಜಯಭಾಸ್ಕರ್, ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು.

ದಿನಾಂಕ: 30-08-2017, ಬುಧವಾರ, ಸಮಯ : ಬೆಳಿಗ್ಗೆ 10.00 ಗಂಟೆಗೆ
ಸ್ಥಳ: ಕುವೆಂಪು ಸಭಾಂಗಣ, ಜಿ.ಕೆ.ವಿ.ಕೆ, ಬೆಂಗಳೂರು.

**3. ಪತ್ರಿಕಾಗೋಷ್ಠಿ:**

ಪ್ರೊ. ಎಸ್. ಜಿ. ಸಿದ್ದರಾಮಯ್ಯ, ಅಧ್ಯಕ್ಷರು, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು

ದಿನಾಂಕ: 30-08-2017, ಬುಧವಾರ, ಸಮಯ: ಮಧ್ಯಾಹ್ನ 3.00 ಗಂಟೆಗೆ

ಪರಿಶೀಲನೆ ಇಲಾಖೆ : ಮಾನ್ಯ ಉಪ ಕುಲಪತಿಗಳ ಕಚೇರಿ, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾನಿಲಯ, 4ನೇ 'ಟಿ' ಬ್ಲಾಕ್, ಜಯನಗರ, ಬೆಂಗಳೂರು-41.

## ಪತ್ರಕರ್ತರ ಗಮನಕ್ಕೆ

## ದಸರಾ ಮಹೋತ್ಸವ – 2017 ರ ವರದಿಗಾಗಿ ಮಾಧ್ಯಮದವರಿಗೆ ಪಾಸ್ ನೀಡುವ ಕುರಿತು.

**ದಸರಾ ಮಹೋತ್ಸವ -2017 ರ ವರದಿಗಾಗಿ ಆಗಮಿಸುವ ಮಾಧ್ಯಮ ಪ್ರತಿನಿಧಿಗಳಿಗೆ ಪಾಸ್ ನೀಡಲು ಕಾರ್ಯಸೂಚಿ ರೂಪಿಸಲಾಗಿದ್ದು, ಕಾರ್ಯಸೂಚಿಯನ್ವಯ ಮಾಧ್ಯಮ ಪಾಸ್ ನೀಡಲಾಗುವುದು.**

**ಮೈಸೂರು ಹೊರತುಪಡಿಸಿ ಇತರೆ ಜಿಲ್ಲಾ ಕೇಂದ್ರಗಳು, ರಾಜ್ಯ ಹಾಗೂ ರಾಷ್ಟ್ರಮಟ್ಟದ ಮಾನ್ಯತೆ ಪಡೆದ ಮಾಧ್ಯಮ ಪ್ರತಿನಿಧಿಗಳಿಗೆ ಈ ಕೆಳಗಿನಂತೆ ಮಾಧ್ಯಮ ಸಂಸ್ಥೆಯ ಮುಖ್ಯಸ್ಥರ ಶಿಫಾರಸ್ಸಿಗೆ ಅನುಗುಣವಾಗಿ ಪಾಸ್ ವಿತರಿಸಲಾಗುವುದು.**

**ಇತರ ಜಿಲ್ಲಾ ಕೇಂದ್ರಗಳಿಂದ ಪ್ರಕಟವಾಗುವ ಪತ್ರಿಕೆಗಳ ಮಾನ್ಯತೆ ಪಡೆದ ವರದಿಗಾರರು – ಒಬ್ಬರು, ರಾಜ್ಯ ಮಟ್ಟದ ಪತ್ರಿಕೆಗಳು – ಮಾನ್ಯತೆ ಪಡೆದ ಒಬ್ಬ ವರದಿಗಾರ ಹಾಗೂ ಒಬ್ಬ ಛಾಯಾಗ್ರಾಹಕ, ಉಪಗ್ರಹ**

ವಾಹಿನಿಗಳು – ಮಾನ್ಯತೆ ಪಡೆದ ಇಬ್ಬರು ವರದಿಗಾರರು ಹಾಗೂ ಇಬ್ಬರು ಕ್ಯಾಮೆರಾಮೆನ್‌ಗಳಿಗೆ ಪಾಸ್ ನೀಡಲಾಗುವುದು.

ನೇರಪ್ರಸಾರವಿದ್ದಲ್ಲಿ ಹೆಚ್ಚಿನ ಪಾಸ್‌ಗಳ ಅಗತ್ಯವಿದ್ದಲ್ಲಿ ಉಪ ನಿರ್ದೇಶಕರ ಕಚೇರಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಮೈಸೂರು ಇಲ್ಲಿ ನೇರವಾಗಿ ಸಂಪರ್ಕಿಸಬಹುದು.

ಮಾಧ್ಯಮ ಕಚೇರಿಯಿಂದ ಮಾಧ್ಯಮ ಪ್ರತಿನಿಧಿಗಳ ಪಟ್ಟಿಯನ್ನು ಭರ್ತಿಮಾಡಿದ ನಿಗದಿತ ನಮೂನೆ ಸಹಿತ ಪ್ರತಿ ವ್ಯಕ್ತಿಯ ಇತ್ತೀಚಿನ ಎರಡು ಭಾವಚಿತ್ರದೊಂದಿಗೆ ಆಗಸ್ಟ್ 31 ರ ಸಂಜೆ 5.00 ಗಂಟೆಯೊಳಗೆ ಸುದ್ದಿ ಮತ್ತು ಪತ್ರಿಕಾ ವಿಭಾಗದ ವಾರ್ತಾ ಸಹಾಯಕರಾದ ಜಿ. ಜಡಿಯಪ್ಪ ಅವರಲ್ಲಿ ಸಲ್ಲಿಸಲು ಕೋರಿದೆ.

ನಿರ್ದೇಶಕರ ಪರವಾಗಿ.

ಸಂಖ್ಯೆ 103/103

**ಪತ್ರಿಕಾ ಪ್ರಕಟಣೆ**

# ಘನ ಹಾಗೂ ಮಲತ್ಯಾಜ್ಯ ನಿರ್ವಹಣೆಗೆ ನಗರ, ಸ್ಥಳೀಯ ಸಂಸ್ಥೆಗಳು ಹೆಚ್ಚಿನ ಆದ್ಯತೆ ನೀಡಿ ಕೆಲಸ ನಿರ್ವಹಿಸಬೇಕು – ಸಚಿವ ಈಶ್ವರ್ ಖಂಡ್ರೆ

ಬೆಂಗಳೂರು, ಆಗಸ್ಟ್ 29 (ಕರ್ನಾಟಕ ವಾರ್ತೆ)

ಘನ ತ್ಯಾಜ್ಯ ನಿರ್ವಹಣೆ ಹಾಗೂ ಮಲತ್ಯಾಜ್ಯ ನಿರ್ವಹಣೆ ಬಗ್ಗೆ ನಗರ, ಪಟ್ಟಣ ಹಾಗೂ ಸ್ಥಳೀಯ ಸಂಸ್ಥೆಗಳು ಹೆಚ್ಚಿನ ಆದ್ಯತೆ ನೀಡಿ ಕರ್ತವ್ಯ ನಿರ್ವಹಿಸಬೇಕು ಎಂದು ಪೌರಾಡಳಿತ ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರಾದ ಈಶ್ವರ್ ಖಂಡ್ರೆ ಅವರು ತಿಳಿಸಿದರು.

ವಿಕಾಸಸೌಧದ ಸಮ್ಮೇಳನ ಸಭಾಂಗಣದಲ್ಲಿ ಇಂದು ನಗರ ಸ್ಥಳೀಯ ಸಂಸ್ಥೆಗಳಲ್ಲಿನ ಅಧ್ಯಕ್ಷರು, ಉಪಾಧ್ಯಕ್ಷರು ಮತ್ತು ಅಧಿಕಾರಿಗಳಿಗಾಗಿ ಏರ್ಪಡಿಸಿದ್ದ ಸ್ವಚ್ಛ ಭಾರತ್ ಮಿಷನ್ ಪರಿಣಾಮಕಾರಿ ಅನುಷ್ಠಾನ ಮತ್ತು ಫೀಕಲ್ ಸ್ಲಡ್ಜ್ ಮ್ಯಾನೇಜ್‌ಮೆಂಟ್ ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡಿದ ಸಚಿವರು 2018 ರ ಒಳಗಾಗಿ ರಾಜ್ಯವನ್ನು ಬಯಲು-ಬಹಿರ್ದೆಸೆ ಮುಕ್ತ ರಾಜ್ಯವನ್ನಾಗಿ ಘೋಷಣೆ ಮಾಡುವ ಗುರಿಹೊಂದಲಾಗಿದೆ ಎಂದರು.

ನಗರ ಮತ್ತು ಪಟ್ಟಣ ಪ್ರದೇಶಗಳಲ್ಲಿ ಜನರಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸುವುದರ ಜೊತೆಗೆ ಸ್ವಚ್ಛತೆ ಮತ್ತು ನೈರ್ಮಲ್ಯ ಕಾಪಾಡುವ ಮೂಲಕ ಜನರ ಆರೋಗ್ಯ ಸುಧಾರಣೆಗೂ ಗಮನ ಹರಿಸಬೇಕಾಗಿದೆ, ರಾಜ್ಯದ 277 ನಗರ ಸ್ಥಳೀಯ ಸಂಸ್ಥೆಗಳ ಪೈಕಿ 19 ನಗರ ಹಾಗೂ ಪಟ್ಟಣಗಳನ್ನು ಬಯಲು – ಬಹಿರ್ದೆಸೆ ಮುಕ್ತ

ಸ್ಥಳಗಳೆಂದು ಈಗಾಗಲೇ ಘೋಷಣೆ ಮಾಡಲಾಗಿದೆ. 2017-18 ನೇ ಸಾಲಿಗೆ ಇನ್ನೂ 100 ಪಟ್ಟಣಗಳನ್ನು ಬಯಲು – ಬಹಿರ್ದೆಸೆ ಮುಕ್ತ ಸ್ಥಳಗಳೆಂದು ಗೋಷಿಸುವ ಗುರಿ ಹೊಂದಲಾಗಿದೆ ಎಂದು ಸಚಿವರು ತಿಳಿಸಿದರು.

ಗ್ರಾಮೀಣ ಭಾಗದಿಂದ ನಗರ ಪ್ರದೇಶಗಳಿಗೆ ಬರುತ್ತಿರುವ ವಲಸಿಗರ ಸಂಖ್ಯೆ ಹೆಚ್ಚುತ್ತಿದ್ದು 2026 ರ ವೇಳೆಗೆ ನಗರ ಪ್ರದೇಶಗಳ ಜನಸಂಖ್ಯೆ ಪ್ರಮಾಣ ಶೇ 55 ರಿಂದ 60 ರಷ್ಟಾಗಲಿದೆ, ಹೆಚ್ಚುತ್ತಿರುವ ಜನಸಂಖ್ಯೆಗೆ ಅನುಗುಣವಾಗಿ ಅವರಿಗೆ ಅಗತ್ಯ ಮೂಲಭೂತ ಸೌಕರ್ಯ ಒದಗಿಸುವುದು ಸರ್ಕಾರದ ಜವಾಬ್ದಾರಿಯಾಗಿದ್ದು, ಈ ನಿಟ್ಟಿನಲ್ಲಿ ಸರ್ಕಾರ ಎಲ್ಲಾ ಮುಂಜಾಗ್ರತಾ ಕ್ರಮ ಕೈಗೊಳ್ಳಲಿದೆ ಎಂದರು.

ನಗರ ಹಾಗೂ ಸ್ಥಳೀಯ ಸಂಸ್ಥೆಗಳು ಇನ್ನೂ ಹೆಚ್ಚು ಪರಿಣಾಕಾರಿಯಾಗಿ ಕರ್ತವ್ಯ ನಿರ್ವಹಿಸಲು ಅನುಕೂಲವಾಗುವಂತೆ ಖಾಲಿ ಇರುವ ಮೂರು ಸಾವಿರ ಹುದ್ದೆಗಳನ್ನು ಭರ್ತಿಮಾಡಲು ಈಗಾಗಲೇ ಕ್ರಮ ಕೈಗೊಳ್ಳಲಾಗಿದ್ದು ನೇಮಕಾತಿ ಪ್ರಕ್ರಿಯೆ ಚಾಲ್ತಿಯಲ್ಲಿದೆ ಎಂದು ಮಾತನಾಡಿದ ಸಚಿವರು ಗ್ರಾಮೀಣ ಭಾಗಗಳಲ್ಲಿ ಶೌಚಾಲಯಗಳನ್ನು ನಿರ್ಮಿಸಿಕೊಳ್ಳಲು ಮುಂದೆ ಬರುವವರಿಗೆ 15 ಸಾವಿರ ರೂ. ನೀಡಲಾಗುವುದು ಎಂದು ತಿಳಿಸಿದರು.

ಈ ಕಾರ್ಯಾಗಾರದಲ್ಲಿ ಭಾಗವಹಿಸಿರುವವರನ್ನು ದೇವನಹಳ್ಳಿಯಲ್ಲಿ ಹಾಲಿ ಆಧುನಿಕವಾಗಿ ನಿರ್ಮಾಣಗೊಂಡಿರುವ ಮಲತ್ಯಾಜ್ಯ ಸಂಸ್ಕರಣ ಘಟಕಕ್ಕೆ ಕರೆದುಕೊಂಡು ಹೋಗಲಾಗುವುದು. ಸ್ಥಳೀಯ ಸಂಸ್ಥೆಗಳ ಚುನಾಯಿತ ಜನಪ್ರತಿನಿಧಿಗಳು ಘನತ್ಯಾಜ್ಯ ನಿರ್ವಹಣೆ, ವಿಶೇಷವಾಗಿ ಮಲತ್ಯಾಜ್ಯ ನಿರ್ವಹಣೆ ಬಗ್ಗೆ ಜನರಲ್ಲಿ ಅರಿವು ಮೂಡಿಸುವಂತ ಕೆಲಸ ಮಾಡಬೇಕು ಎಂದು ಸಚಿವರು ಮನವಿ ಮಾಡಿದರು.

ಕಲಬುರಗಿ ಮತ್ತು ಮೈಸೂರು ವಿಭಾಗೀಯ ಮಟ್ಟದ ನಗರ ಸ್ಥಳೀಯ ಸಂಸ್ಥೆಗಳ ಚುನಾಯಿತ ಜನಪ್ರತಿನಿಧಿಗಳು ಪೌರಾಡಳಿತ ಇಲಾಖೆಯ ಕಾರ್ಯದರ್ಶಿಗಳಾದ ಅಜುಂಪರ್ವೇಜ್, ನಿರ್ದೇಶಕರಾದ ಡಾ. ವಿಶಾಲ್ ಸೇರಿದಂತೆ ಗಣ್ಯರು ಕಾರ್ಯಕ್ರಮದಲ್ಲಿ ಹಾಜರಿದ್ದರು.

ಎಸ್‌ಎಂ:ಕೆಪಿಪಿ:ಜೆಡಿ:ಜಿಪಿಆರ್

ಸಂಖ್ಯೆ 104/104

## ಕೃಷಿ ಆಧಾರಿತ ಬೆಳೆಗಳಿಗೆ ತುಂಗಭದ್ರ ಎಡದಂಡೆ ಕಾಲುವೆಯಿಂದ ನೀಡಲು ಬಿಡಲು ತೀರ್ಮಾನ – ಸಚಿವ ಸಂತೋಷ್ ಎಸ್. ಲಾಡ್

ಬೆಂಗಳೂರು, ಆಗಸ್ಟ್ 29 (ಕರ್ನಾಟಕ ವಾರ್ತೆ)

ರಾಯಚೂರು, ಕೊಪ್ಪಳ ಹಾಗೂ ಬಳ್ಳಾರಿ ಜಿಲ್ಲೆಗಳಲ್ಲಿ ಸುಮಾರು 6.50 ಲಕ್ಷ ಎಕ್ಕರೆ ಪ್ರದೇಶಗಳಲ್ಲಿ ರೈತರು ಕೃಷಿ ಆಧಾರಿತ ಬೆಳೆಗಳನ್ನು ಬೆಳೆದಿದ್ದು ಮುಂಗಾರು ಹಂಗಾಮಿನ ಮಳೆ ಕ್ಷೀಣಿಸಿರುವುದರಿಂದ ತುಂಗಭಧ್ರಾ

ಎಡದಂಡೆ ಮುಖ್ಯ ಕಾಲುವೆಯಿಂದ ನೀರು ಬಿಡಲು ತೀರ್ಮಾನಿಸಲಾಯಿತು ಎಂದು ಕಾರ್ಮಿಕ ಹಾಗೂ ಬಳ್ಳಾರಿ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ್ ಎಸ್. ಲಾಡ್ ಅವರು ತಿಳಿಸಿದರು.

ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಇಂದು ನಡೆದ ತುಂಗಭದ್ರಾ ನೀರಾವರಿ 109ನೇ ಸಲಹಾ ಸಮಿತಿ ಸಭೆಯ ಅಧ್ಯಕ್ಷತೆವಹಿಸಿ ಸಭೆ ಮುಗಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು ರೈತರು ಬೆಳೆದಿರುವ ಬೆಳೆಗಳಿಗೆ ತೊಂದರೆಯಾಗದಂತೆ 60 ದಿನಗಳ ಕಾಲ 2800 ಕ್ಯೂಸೇಕ್ಸ್ ನೀರನ್ನು ತುಂಗಭದ್ರಾ ಎಡದಂಡೆ ಮುಖ್ಯ ಕಾಲುವೆಯಿಂದ ನೀರು ಹರಿಸಲಾಗುವುದು. ನಂತರದ ದಿನಗಳಲ್ಲಿ ನೀರಿನ ಲಭ್ಯತೆ ಆಧರಿಸಿ 30 ದಿನಗಳ ಕಾಲ 3800 ಕ್ಯೂಸೇಕ್ಸ್ ನೀರನ್ನು ಬಿಡಲಾಗುವುದು ಎಂದು ಸಚಿವರು ತಿಳಿಸಿದರು.

ತುಂಗಭದ್ರಾ ಜಲಾಶಯದಲ್ಲಿ ಸುಮಾರು 75 ಟಿ.ಎಂ.ಸಿ. ನೀರು ಸಂಗ್ರಹವಿರುವ ಸಾಧ್ಯತೆ ಇದ್ದು, ಅದರಲ್ಲಿ ಆ ಭಾಗಕ್ಕೆ ಕುಡಿಯುವ ನೀರಿಗಾಗಿ 12 ಟಿ.ಎಂ.ಸಿ. ನೀರು ಬೇಕಾಗುತ್ತದೆ. ಹಾಲಿ ಬೆಳೆದಿರುವ ಬೆಳೆಗಳಿಗೆ ಸುಮಾರು 33 ಟಿಎಂಸಿ ನೀರು ಬೇಕಾಗುತ್ತದೆ. ಜಲಾಶಯದಲ್ಲಿ ಹಾಲಿ ಸಂಗ್ರಹವಿರುವ ನೀರಿನ ಲಭ್ಯತೆ ಆಧರಿಸಿ ಕುಡಿಯುವ ನೀರನನ್ನು ಸಂಗ್ರಹಿಸಿ ಉಳಿಕೆ ನೀರಿನಲ್ಲಿ ಕೃಷಿ ಚಟುವಟಿಕೆಗಳಿಗೆ ನೀರು ಬಿಡಲಾಗುವುದು, ರೈತರು ಹೆಚ್ಚುವರಿ ಭತ್ತ ಬಿತ್ತನೆ ಮಾಡುವುದನ್ನು ನಿಲ್ಲಿಸಿ ಮಳೆ ಆಧಾರಿತ ಬೆಳೆಗಳನ್ನು ಬೆಳೆಯುವಂತೆ ಆ ಭಾಗದ ರೈತರಲ್ಲಿ ಮನವಿ ಮಾಡಿದರು.

ಮುಂಗಾರು ಹಂಗಾಮಿನಲ್ಲಿ ಮಳೆ ಕೊರತೆಯಾಗುತ್ತಿರುವ ಹಿನ್ನೆಲೆಯಲ್ಲಿ 2018 ರವರೆಗೆ ಆ ಭಾಗದ ಜನರಿಗೆ ಕುಡಿಯುವ ನೀರು ಸರಬರಾಜು ಮಾಡಲು ಎಲ್ಲಾ ಮುಂಜಾಗ್ರತಾ ಕ್ರಮ ಜರುಗಿಸಿ ನೀರನ್ನು ಕಾಯ್ದಿರಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು. ಜಲಾಶಯದಲ್ಲಿನ ನೀರಿನ ಲಭ್ಯತೆ ಆಧಾರದ ಮೇಲೆ ಕೃಷಿ ಚಟುವಟಿಕೆಗಳಿಗೆ ನೀರು ಬಿಡಲಾಗುವುದು ಎಂದು ಇದೇ ಸಂದರ್ಭದಲ್ಲಿ ಸಚಿವರು ತಿಳಿಸಿದರು.

ಎಸ್‌ಎಂ:ಕೆಪಿಪಿ:ಜೆಡಿ:ಜಿಪಿಆರ್

ಸಂಖ್ಯೆ 105/105

## ಸೆಪ್ಟೆಂಬರ್ ಅಂತ್ಯಕ್ಕೆ 16035 ಲಕ್ಷ ಬಿ.ಪಿ.ಎಲ್ ಕುಟುಂಬಗಳಿಗೆ ಪಡಿತರ ಚೀಟಿ ವಿತರಣೆ – ಸಚಿವ ಯು.ಟಿ. ಖಾದರ್.

ಬೆಂಗಳೂರು, ಆಗಸ್ಟ್ 29 (ಕರ್ನಾಟಕ ವಾರ್ತೆ)

ಮುಂಬರುವ ಸೆಪ್ಟೆಂಬರ್ ತಿಂಗಳ ಅಂತ್ಯಕ್ಕೆ ಸುಮಾರು 16.35 ಲಕ್ಷ ಬಿ.ಪಿ.ಎಲ್. ಕುಟುಂಬಗಳಿಗೆ ಪಡಿತರ ಕಾರ್ಡುಗಳನ್ನು ಆನ್‌ಲೈನ್ ಮೂಲಕ ಅವರ ಮನೆ ಬಾಗಿಲಿಗೆ ತಲುಪಿಸಲಾಗುವುದು ಎಂದು ಆಹಾರ ಮತ್ತು ನಾಗರೀಕ ಪೂರೈಕೆ ಸಚಿವ ಯು.ಟಿ ಖಾದರ್ ಅವರು ತಿಳಿಸಿದರು.

ವಿಧಾನಸೌಧದ ತಮ್ಮ ಕಚೇರಿಯಲ್ಲಿ ಇಂದು ಸುಧಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಸಚಿವರು ಈಗಾಗಲೇ ಒಂದು ಲಕ್ಷ ಫಲಾನುಭವಿಗಳಿಗೆ ಪಡಿತರ ಕಾರ್ಡುಗಳನ್ನು ತಲುಪಿಸಲಾಗಿದೆ. 11,84,000 ಅರ್ಜಿಗಳನ್ನು ಪರಿಶೀಲನೆ ನಡೆಸಲಾಗಿದೆ. ಅವರಲ್ಲಿ 6.5 ಲಕ್ಷ ಅರ್ಜಿಗಳನ್ನು ಡಾಟಾ ಎಂಟ್ರಿ ಮಾಡಲಾಗಿದೆ ಎಂದು ತಿಳಿಸಿದರು.

ಪಡಿತರ ಚೀಟಿಗಳನ್ನು ಪರಿಣಾಮಕಾರಿಯಾಗಿ ವಿತರಿಸುವ ಸಂಬಂಧ ಆನ್‌ಲೈನ್ ವ್ಯವಸ್ಥೆಯನ್ನು ಜಾರಿಗೆ ತರಲಾಗಿತ್ತು. ಆನ್‌ಲೈನ್ ಮೂಲಕ ಪಡಿತರ ಚೀಟಿ ಬಯಸಿ ನೊಂದಾಯಿಸಿಕೊಂಡಿರುವ ಫಲಾನುಭವಿಗಳಿಗೆ ಅವರ ಮನೆಗೆ ಪಡಿತರ ಚೀಟಿ ತಲುಪಿಸುವ ವ್ಯವಸ್ಥೆ ಜಾರಿಯಲ್ಲಿದೆ ಎಂದರು.

ತುರ್ತು ಸಂದರ್ಭಗಳಲ್ಲಿ ಬೇಗ ಪಡಿತರ ಚೀಟಿ ಬೇಕಾದಲ್ಲಿ ಅಂತಹ ಫಲಾನುಭವಿಗಳು ಗ್ರಾಮ ಪಂಚಾಯಿತಿ ಕಚೇರಿಗೆ ತೆರಳಿ ಅಗತ್ಯ ದಾಖಲಾತಿ ನೀಡಿದಲ್ಲಿ ಆಹಾರ ಮತ್ತು ನಾಗರೀಕ ಇಲಾಖೆಯ ಉಪ ನಿರ್ದೇಶಕರು ಪರಿಶೀಲನೆ ನಡೆಸಿ ಪಡಿತರ ಚೀಟಿ ನೀಡುವಂತೆ ಈಗಾಗಲೇ ಆದೇಶ ನೀಡಲಾಗಿದೆ ಎಂದು ಸಚಿವರು ತಿಳಿಸಿದರು.

ರಾಜ್ಯದಲ್ಲಿ 20,402 ನ್ಯಾಯಬೆಲೆ ಅಂಗಡಿಗಳಿದ್ದು ಎಲ್ಲಾ ನ್ಯಾಯಬೆಲೆ ಅಂಗಡಿಗಳು ಪಾಯಿಂಟ್ ಆಫ್ ಸ್ಕೇಲ್ ಮಿಷನನ್ನು ಅಳವಡಿಸಿಕೊಳ್ಳುವಂತೆ ನ್ಯಾಯಬೆಲೆ ಅಂಗಡಿಗಳಿಗೆ ಸೂಚಿಸಲಾಗಿದೆ, ಈಗಾಗಲೇ 10 ಸಾವಿರ ನ್ಯಾಯಬೆಲೆ ಅಂಗಡಿಗಳು ಈ ಮಿಷನನ್ನು ಅಳವಡಿಸಿಕೊಂಡಿದ್ದಾರೆ. ಅಂತಹ ನ್ಯಾಯಬೆಲೆ ಅಂಗಡಿಗಳ ಮಾಲೀಕರಿಗೆ ಪ್ರತಿ ಕುಟುಂಬಕ್ಕೆ 87 ರೂ. ನಂತೆ ಪ್ರೋತ್ಸಾಹ ಹಣ ನೀಡಲಾಗುವುದು. ಪಾಯಿಂಟ್ ಆಫ್ ಸ್ಕೇಲ್ ಮಿಷನ್ ಅಳವಡಿಸಿಕೊಳ್ಳುವುದರಿಂದ ನ್ಯಾಯಬೆಲೆ ಅಂಗಡಿಗಳಲ್ಲಾಗುವ ಸಣ್ಣಪುಟ್ಟ ಲೋಪಗಳನ್ನು ಕಂಡು ಹಿಡಿಯಲು ಸಾಧ್ಯವಿದೆ ಎಂದು ಸಚಿವ ಯು.ಟಿ. ಖಾದರ್ ಅವರು ತಿಳಿಸಿದರು.

ಎಸ್‌ಎಂ:ಕೆಪಿಪಿ:ಜೆಡಿ:ಜಿಪಿಆರ್

ಸಂಖ್ಯೆ 106/106

# ತಾತ್ಕಾಲಿಕ ಆಯ್ಕೆಪಟ್ಟಿ ಪ್ರಕಟ

ಬೆಂಗಳೂರು, ಆಗಸ್ಟ್ 29 (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕಸೇವಾ ಆಯೋಗವು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಲ್ಲಿನ ಅಧೀಕ್ಷಕರು ದರ್ಜೆ-1 ರ 10 (ಹೈಕ) ಹುದ್ದೆ ಹಾಗೂ ಮೀನುಗಾರಿಕೆ ಇಲಾಖೆಯಲ್ಲಿನ ಮೀನುಗಾರಿಕೆ ಸಹಾಯಕ ನಿರ್ದೇಶಕರು (ಶ್ರೇಣಿ-2) 39+1 (ಬ್ಯಾ.ಲಾ) + 08 (ಹೈಕ) ಹುದ್ದೆಗಳ ತಾತ್ಕಾಲಿಕ ಆಯ್ಕೆಪಟ್ಟಿಯನ್ನು ಆಗಸ್ಟ್ 28 ರಂದು ಆಯೋಗದ ಅಂತರ್ಜಾಲದಲ್ಲಿ "http://kpsc.kar.nic.in/Selection List" ನಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಿದೆ.

ಆಕ್ಷೇಪಣೆಗಳನ್ನು ಸಲ್ಲಿಸಲು ಬಯಸುವ ಅಭ್ಯರ್ಥಿಗಳು ಸೆಪ್ಟೆಂಬರ್ 3ರ ಒಳಗಾಗಿ ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು – 560 001, ಇವರಿಗೆ ಸಲ್ಲಿಸಬಹುದಾಗಿದೆ. ನಿಗದಿತ ದಿನಾಂಕದ ನಂತರ ಸಲ್ಲಿಸುವ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಕರ್ನಾಟಕ ಲೋಕಸೇವಾ ಆಯೋಗದ ಪ್ರಕಟಣೆ ತಿಳಿಸಿದೆ.

ಎಸ್‌ಎಂ:ಜೆಡಿ:ಜಿಪಿಆರ್

ಸಂಖ್ಯೆ 107/107

# ಸಹಾಯಕ/ಕಿರಿಯ ಅಭಿಯಂತರರ ಹುದ್ದೆಗಳಿಗೆ ಪರೀಕ್ಷೆ

ಬೆಂಗಳೂರು, ಆಗಸ್ಟ್ 29 (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕಸೇವಾ ಆಯೋಗವು ಕರ್ನಾಟಕ ಜಲಸಂಪನ್ಮೂಲ ಇಲಾಖೆಯಲ್ಲಿ ಖಾಲಿ ಇರುವ ಒಟ್ಟು 889 ಸಹಾಯಕ ಅಭಿಯಂತರರ (ಸಿವಿಲ್/ಮೆಕ್ಯಾನಿಕಲ್) ಮತ್ತು ಕಿರಿಯ ಅಭಿಯಂತರರ (ಸಿವಿಲ್/ಮೆಕ್ಯಾನಿಕಲ್) ಹುದ್ದೆಗಳಿಗೆ ಪರೀಕ್ಷೆಗಳನ್ನು ಈ ಕೆಳಕಂಡ ದಿನಾಂಕಗಳಂದು ನಡೆಸಲಿದೆ.

ಸಹಾಯಕ ಆಬಿಯಂತರರು/ಕಿರಿಯ ಅಭಿಯಂತರರು (ಅರ್ಜಿಯಲ್ಲಿ ವಿನಾಯಿತಿ ಕೋರದ ಅಭ್ಯರ್ಥಿಗಳಿಗೆ) ಕಡ್ಡಾಯ ಕನ್ನಡ ಭಾಷೆ ಪರೀಕ್ಷೆಯನ್ನು ಸೆಪ್ಟೆಂಬರ್ 8 ರಂದು ಬೆಳಿಗ್ಗೆ 10.00 ರಿಂದ 1.00 ಗಂಟೆವರೆಗೆ.

ಕಿರಿಯ ಅಭಿಯಂತರರು (ಸಿವಿಲ್/ಮೆಕ್ಯಾನಿಕಲ್) ಸಾಮಾನ್ಯ ಪತ್ರಿಕೆ (ವಸ್ತುನಿಷ್ಠ ಬಹು ಆಯ್ಕೆ ಮಾದರಿ) ಪರೀಕ್ಷೆಯನ್ನು ಸೆಪ್ಟೆಂಬರ್ 9 ರಂದು ಬೆಳಿಗ್ಗೆ 10.00 ಗಂಟೆಯಿಂದ ಮಧ್ಯಾಹ್ನ 1.00 ಗಂಟೆವರೆಗೆ ಹಾಗೂ ನಿರ್ದಿಷ್ಠ ಪತ್ರಿಕೆ (ವಸ್ತು ನಿಷ್ಠ ಬಹು ಆಯ್ಕೆ ಮಾದರಿ) ಪರೀಕ್ಷೆಯನ್ನು ಮಧ್ಯಾಹ್ನ 2.00 ಗಂಟೆಯಿಂದ ಸಂಜೆ 4.00 ಗಂಟೆವರೆಗೆ.

ಸಹಾಯಕ ಅಭಿಯಂತರರು (ಸಿವಿಲ್/ಮೆಕ್ಯಾನಿಕಲ್) ಸಾಮಾನ್ಯ ಪತ್ರಿಕೆ, (ವಸ್ತು ನಿಷ್ಠ ಬಹು ಆಯ್ಕೆ ಮಾದರಿ) ಪರೀಕ್ಷೆಯನ್ನು ಸೆಪ್ಟೆಂಬರ್ 10 ರಂದು ಬೆಳಿಗ್ಗೆ 10.00 ಗಂಟೆಯಿಂದ ಮಧ್ಯಾಹ್ನ 1.00 ಗಂಟೆವರೆಗೆ ಹಾಗೂ ನಿರ್ದಿಷ್ಠ ಪತ್ರಿಕೆ (ವಸ್ತು ನಿಷ್ಠ ಬಹು ಆಯ್ಕೆ ಮಾದರಿ) ಪರೀಕ್ಷೆಯನ್ನು ಮಧ್ಯಾಹ್ನ 2.00 ಗಂಟೆಯಿಂದ ಸಂಜೆ 4.00 ಗಂಟೆವರೆಗೆ ನಡೆಸಲಿದೆ ಎಂದು ಕರ್ನಾಟಕ ಲೋಕಸೇವಾ ಆಯೋಗದ ಪ್ರಕಟಣೆ ತಿಳಿಸಿದೆ.

ಎಸ್‌ಎಂ:ಜೆಡಿ:ಜಿಪಿಆರ್

ಸಂಖ್ಯೆ 108/108

# ವಸತಿ ಸಚಿವರ ಪ್ರವಾಸ

ಬೆಂಗಳೂರು, ಆಗಸ್ಟ್ 29 (ಕರ್ನಾಟಕ ವಾರ್ತೆ)

ವಸತಿ ಸಚಿವ ಹಾಗೂ ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವರಾದ ಎಂ. ಕೃಷ್ಣಪ್ಪ ಅವರು ಆಗಸ್ಟ್ 30 ರಂದು ಮಂಡ್ಯ ಜಿಲ್ಲೆಯಲ್ಲಿನ ವಿವಿಧ ಕಾರ್ಯಕ್ರಮಗಳು ಹಾಗೂ ಸಭೆಯಲ್ಲಿ ಭಾಗವಹಿಸಿ ಅದೇ ದಿನ ಸಂಜೆ ಕೇಂದ್ರಸ್ಥಾನಕ್ಕೆ ಆಗಮಿಸಲಿದ್ದಾರೆ.

ಎಸ್‌ಎಂ:ಜೆಡಿ:ಜಿಪಿಆರ್